### ಲೋಪದೋಷವಿದ್ದರೆ ಯಾವುದೇ ಕಾರಣಕ್ಕೂ ಸಹಿಸಿಕೊಳ್ಳುವುದಿಲ್ಲ | ಸಿದ್ದರಾಮಯ್ಯ ಅವರಿಗೆ ಅಗತ್ಯ ದಾಖಲೆ ನೀಡುವುದಕ್ಕೆ ಸಿದ್ಧ | ಕರೋನಾ ನಿರ್ವಹಣೆಗೆ ಸಂಬಂಧಿಸಿದಂತೆ ಸೂಕ್ತ ಸಲಹೆ- ಸೂಚನೆಗಳನ್ನು ನೀಡಲಿ

# ವೈದ್ಯಕೀಯ ಕಿಟ್‌ನಲ್ಲಿ ಅವ್ಯವಹಾರ: ಕ್ರಮ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಕರೋನಾ ಸಮಯದಲ್ಲಿ ಖರೀದಿ ಮಾಡಿರುವ ವೈದ್ಯಕೀಯ ಕಿಟ್‌ನಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಸಮಗ್ರ ತನಿಖೆ ನಡೆಸುತ್ತೇವೆ. ಒಂದು ವೇಳೆ ಯಾವುದೇ ಅಧಿಕಾರಿ ಅಥವಾ ವ್ಯಕ್ತಿ ಅವ್ಯವಹಾರ ನಡೆಸಿರುವುದು ಸಾಬೀತಾದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಖಡಕ್ ಎಚ್ಚರಿಕೆ ನೀಡಿದ್ದಾರೆ.

ಮೆಡಿಕಲ್ ಕಿಟ್ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎನ್ನುವ ಸಾಲು ಸಾಲು ಆರೋಪಕ್ಕೆ ಯಡಿಯೂರಪ್ಪ ಅವರು ಮೌನ ಮುರಿದಿದ್ದು, ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ನಾಯಕರು ಮಾಡುತ್ತಿರುವ ಆರೋಪ ನಿಜವಾಗಿದ್ದರೆ, ಅದನ್ನು ಸರಿಪಡಿಸುವ ಕೆಲಸವನ್ನು ಮಾಡುತ್ತೇವೆ. ಆದರೆ ಯಾರಾದರೂ ಅವ್ಯವಹಾರದಲ್ಲಿ ಭಾಗಿಯಾಗಿದ್ದರೆ ಅಂತಹವರ ವಿರುದ್ಧ ಮುಲಾಜಿಲ್ಲದೇ ಕ್ರಮಕೈಗೊಳ್ಳುತ್ತೇವೆ ಎಂದರು.

ಸಿದ್ದರಾಮಯ್ಯ ಅವರು ವಿಧಾನಸೌಧಕ್ಕೆ ಬಂದು ಯಾವ ಅಂಕಿಅಂಶಗಳನ್ನು ಬೇಕಾದರೂ ಪಡೆದುಕೊಳ್ಳಲಿ. ವಿಧಾನಸಭೆಯ ಪ್ರತಿಪಕ್ಷ ನಾಯಕರಿಗೆ ಅಧಿಕಾರಿಗಳು ಎಲ್ಲಾ ರೀತಿಯ ದಾಖಲೆಗಳನ್ನು ನೀಡುತ್ತಾರೆ. ಈ ಎಲ್ಲ ದಾಖಲೆಗಳನ್ನು ಸಿದ್ದರಾಮಯ್ಯ ಪರಿಶೀಲನೆ ನಡೆಸಲಿ. ಈಗಾಗಲೇ ಕೆಲವೊಂದು ಲೋಪದೋಷಗಳನ್ನು ಸರಿಪಡಿಸಿದ್ದೇವೆ. ಒಂದು ವೇಳೆ ಲೋಪದೋಷ ಕಂಡುಬಂದರೆ ಅಂತಹ ಅಧಿಕಾರಿಗಳ ವಿರುದ್ಧ ಅನು ಯಾವುದೇ ವ್ಯಕ್ತಿಯಾಗಿರಬಹುದು, ಅಂತಹವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಆದರೆ ಸಿದ್ದರಾಮಯ್ಯ ಅವರು ಯಾವುದೇ ದಾಖಲೆಗಳಿಲ್ಲದೇ ವಿನಾಕಾರಣ ಹಿಂದಿನಿಂದಲೂ ಆರೋಪ ಮಾಡುತ್ತಾ ಬಂದಿದ್ದಾರೆ. ಕರೋನಾದಂತ ಇಂತಹ ಸಮಯದಲ್ಲಿ ಈ ರೀತಿ ರಾಜಕೀಯ ಮಾಡುವುದು ಸರಿಯಲ್ಲ. ವಿರೋಧಪಕ್ಷದ ನಾಯಕರು ಕರೋನಾ ನಿರ್ವಹಣೆಗೆ ಸಂಬಂಧಿಸಿದಂತೆ ಸೂಕ್ತ ಸಲಹೆ- ಸೂಚನೆಗಳನ್ನು ನೀಡಲಿ ಎಂದು ಹೇಳಿದರು.

**ಬೆಂಗಳೂರಲ್ಲಿ ಮುನ್ನೆಚ್ಚರಿಕಾ ಕ್ರಮವಹಿಸಲಾಗಿದೆ:** ಕರೋನಾ ಸೋಂಕಿನ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಎಲ್ಲಾ ಅಗತ್ಯ ಎಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದೇವೆ. ಈಗಾಗಲೇ 450ಕ್ಕಿಂತ ಹೆಚ್ಚು ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಲಾಗಿದೆ. ಯಾವುದೇ ಕಾರಣಕ್ಕೂ ಜನರು ಗಾಬರಿಯಾಗುವ ಅಗತ್ಯವಿಲ್ಲ. ಈ ಪಿಡುಗಿನೊಂದಿಗೆ ಬದುಕಬೇಕಾಗಿದೆ. ಆದ್ದರಿಂದ ಸಾರ್ವಜನಿಕರು ಸಾಮಾಜಿಕ ಅಂತರ ಕಾಯ್ದುಕೊಂಡು ಸರಕಾರದೊಂದಿಗೆ ಸಹಕರಿಸಿದರೆ ಸೋಂಕು ನಿಯಂತ್ರಣ ಮಾಡಬಹುದು. ಈ ದಾರಿ ಬಿಟ್ಟು ನಮಗೆ ಬೇರೆ ದಾರಿಯಿಲ್ಲ. ಇದನ್ನೇ ಪ್ರಧಾನಿ ನರೇಂದ್ರ ಮೋದಿ ಅವರು ಕೂಡ ಹೇಳಿದ್ದಾರೆ ಎಂದು ಹೇಳಿದರು. ಈಗಾಗಲೇ ಬೆಂಗಳೂರಿನಲ್ಲಿ ಸೋಂಕಿತರ ಚಿಕಿತ್ಸೆಗಾಗಿ 10 ಸಾವಿರ ಬೆಡ್‌ಗಳ ವ್ಯವಸ್ಥೆ ಮಾಡಲಾಗುತ್ತಿದೆ. ಯಾವುದೇ ಕೊರತೆಯಾಗದಂತೆ ಕ್ರಮ ಕೈಗೊಳ್ಳುತ್ತಿದ್ದೇವೆ, ಆದ್ದರಿಂದ ಎಲ್ಲರೂ ಸಹಕಾರ ನೀಡಬೇಕು ಎಂದು ಬೆಂಗಳೂರು ಮಹಾನಗರ ಜನತೆಯಲ್ಲಿ ಮನವಿ ಮಾಡುತ್ತೇನೆ ಎಂದು ಹೇಳಿದರು.



ಡಾ. ಬಾಬು ಜಗಜೀವನ್ ರಾಮ್ ಅವರ ಪುಣ್ಯತಿಥಿಯ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬಾಬು ಅವರ ಪ್ರತಿಮೆಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಮಾಲಾರ್ಪಣೆ ಮಾಡಿದರು.

> ರಾಜ್ಯದ ಪ್ರತಿಯೊಬ್ಬ ಪ್ರಜೆಯ ಜೀವ ಮುಖ್ಯವಾಗಿರುವುದರಿಂದ ರಾಜ್ಯ ಸರಕಾರ ಹಲವು ಕ್ರಮವಹಿಸಿದೆ. ಆದರೆ ಸಾರ್ವಜನಿಕರು ಅಂತರ ಕಾಪಾಡಿಕೊಂಡು ಕೋವಿಡ್ ಜತೆ ಬದುಕುವುದು ಅನಿವಾರ್ಯವಾಗಿದೆ. ಇದಕ್ಕೆ ಹೊಂದಿಕೊಳ್ಳಿ.
>
> \- **ಬಿ.ಎಸ್.ಯಡಿಯೂರಪ್ಪ** ಮುಖ್ಯಮಂತ್ರಿ

## ಜಗಜೀವನ್ ರಾಮ್ ಅಪ್ರತಿಮ ನಾಯಕ

ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ಅವರ ಪುಣ್ಯ ತಿಥಿಯ ಅಂಗವಾಗಿ ವಿಧಾನಸೌಧ ಪಶ್ಚಿಮದ್ವಾರದ ಬಳಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬಾಬು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಬಳಿಕ ಮಾತನಾಡಿದ ಯಡಿಯೂರಪ್ಪ, ಬಾಬು ಅವರು ಶೋಷಿತರ ಹಕ್ಕಿಗಾಗಿ ಹೋರಾಟ ಮಾಡಿದ ಮಹಾನ್ ವ್ಯಕ್ತಿ. ಹಸಿರು ಕ್ರಾಂತಿ ಹರಿಕಾರ ಎಂದು ಹೆಸರು ಪಡೆದಂತಹವರು. ದೇಶದ ಪ್ರಥಮ ಸಾರ್ವತ್ರಿಕ ಚುನಾವಣೆಯಿಂದ ಮೊದಲುಗೊಂಡು ಅವರ ಕೊನೆಯ ಉಸಿರು ಇರುವವರೆಗೆ ಸತತ ನಾಲ್ಕು ದಶಕಗಳ ಕಾಲ ಸಂಸತ್ ಸದಸ್ಯರಾಗಿ ಸೇವೆ ಸಲ್ಲಿಸಿದ ಹೆಗ್ಗಳಿಕೆ ಅವರದ್ದು. ಕೃಷಿ ಸಚಿವರಾಗಿ ಹಸಿರು ಕ್ರಾಂತಿಗೆ ಅವರು ನೀಡಿದ ಕೊಡುಗೆ ಅವಿಸ್ಮರಣೀಯವಾದುದು ಎಂದರು. ಸ್ವಾತಂತ್ರ್ಯೋತ್ತರ ಭಾರತದಲ್ಲಿ ಉಂಟಾದ ಆಹಾರದ ಕೊರತೆಯನ್ನು ಸಮರ್ಥವಾಗಿ ಎದುರಿಸಿ ಸುಧಾರಿತ ಬೀಜ ಮತ್ತು ತಳಿಗಳನ್ನು ಅಭಿವೃದ್ಧಿಪಡಿಸಿ ಹಸಿರು ಕ್ರಾಂತಿ ಸಾಧಿಸಲಾಯಿತು. ರಕ್ಷಣಾ ಸಚಿವರಾಗಿಯೂ ಜಗಜೀವನ್ ರಾಮ್ ಅವರ ಸಾಧನೆ ಗಮನಾರ್ಹವಾದುದು ಎಂದು ನೆನಪಿಸಿಕೊಂಡರು.

## ಮತ್ತೆ ಲಾಕ್‌ಡೌನ್ ಇಲ್ಲ; ಬೆಂಗಳೂರು ಬಿಡಬೇಡಿ

ರಾಜ್ಯದಲ್ಲಿ ಯಾವುದೇ ಕಾರಣಕ್ಕೂ ಪುನಃ ಲಾಕ್‌ಡೌನ್ ಜಾರಿ ಮಾಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. ಆದ್ದರಿಂದ ಯಾವುದೇ ಕಾರಣಕ್ಕೂ ಬೆಂಗಳೂರಿನಿಂದ ಜನರು ಊರು ಬಿಟ್ಟು ಹೋಗಬೇಡಿ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಅವರು ಮನವಿ ಮಾಡಿದರು. ಕರೋನಾದೊಂದಿಗೆ ಬದುಕಬೇಕಾದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸೋಂಕು ಪ್ರಕರಣಗಳು ಹೆಚ್ಚಾಗುತ್ತಿದ್ದರೂ ಸರಕಾರದ ಮುಂದೆ ಲಾಕ್‌ಡೌನ್ ಮಾಡುವ ಆಲೋಚನೆ ಇಲ್ಲ ಎಂದು ಪುನರುಚ್ಚರಿಸಿದರು. ನಾನು ರಾಜ್ಯದ ಜನತೆ ಹಾಗೂ ಬೆಂಗಳೂರಿನ ನಾಗರಿಕರಿಗೆ ಮನವಿ ಮಾಡಿಕೊಳ್ಳುವುದೇನೆಂದರೆ ಲಾಕ್‌ಡೌನ್ ಮಾಡಲಾಗುತ್ತಿದೆ ಎಂಬುದು ಕೇವಲ ವದಂತಿ ಅಷ್ಟೇ. ಇಂತಹ ಊಹಾಪೋಹಗಳಿಗೆ ಯಾರೊಬ್ಬರು ಕಿವಿಗೊಡಬಾರದು ಎಂದರು. ರಾಜ್ಯ ಸರಕಾರ ಎಲ್ಲಿಯೂ ಕರೋನಾ ನಿಯಂತ್ರಣ ಮಾಡುವಲ್ಲಿ ವಿಫಲವಾಗಿಲ್ಲ. ಮುಂಜಾಗ್ರತಾ ಕ್ರಮವಾಗಿ ಏನೇನು ಕ್ರಮಗಳನ್ನು ಕೈಗೊಳ್ಳಬೇಕಿತ್ತೊ ಎಲ್ಲವನ್ನೂ ತೆಗೆದುಕೊಂಡಿದ್ದೇವೆ. ಸಾರ್ವಜನಿಕರು ಸರಕಾರದ ಜತೆ ಕೈ ಜೋಡಿಸಬೇಕೆಂದು ಮನವಿ ಮಾಡಿದರು.